# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 19-02-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)
6. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಕುಮಾರಿ ರಜನಿ, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೋಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ರಾಮಯ್ಯ ಬಡಾವಣೆ ಸಮ್ ಮೋವರ್ ರೆಸ್ಟೋರೆಂಟ್ ಹತ್ತಿರ ಸಂಜೆ ವೇಳೆಯಲ್ಲಿ ಹೆಚ್ಚು ಜನ ಸಂದಣಿ ಇದ್ದು, ರಸ್ತೆಯಲ್ಲಿ ಓಡಾಡುವ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಹಾಯಕ ಸಬ್ ಇನ್ಸ್‌ಪೆಕ್ಟರ್ ಕಾನೂನು ಸುವ್ಯವಸ್ಥೆ ರವರು ಮಾತನಾಡಿ, ಸದರಿ ಪ್ರದೇಶದಲ್ಲಿ ಹೆಚ್ಚುವರಿಯಾಗಿ ಪೋಲೀಸ್ ಗಸ್ತನ್ನು ಹಾಕಲಾಗುವುದು ಎಂದು ಸಭೆಗೆ ಉತ್ತರಿಸಿದರು.

2) **ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)** ರವರು ಮಾತನಾಡಿ, ಜಲವಾಯು ವಿಹಾರ್ ಪ್ರದೇಶದಲ್ಲಿ ಇತ್ತೀಚೆಗೆ ಸೊಳ್ಳೆಗಳು ಜಾಸ್ತಿಯಾಗಿದ್ದು, ಆರೋಗ್ಯ ಇಲಾಖೆಯವರು ಕ್ರಮ ಕೈಗೊಳ್ಳಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ, ಫಾಗಿಂಗ್ ಹಾಗೂ ಪವರ್ ಸ್ಪ್ರೇ ಮಾಡಿ, ಸೊಳ್ಳೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

3) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು** ಮಾತನಾಡಿ, ವಾರ್ಡ್ ಪ್ರದೇಶದಲ್ಲಿನ ಮರಗಳು ಬೃಹದಾಕಾರವಾಗಿ ಬೆಳೆದಿದ್ದು, ಇದರಿಂದ ಬೀದಿ ದೀಪಗಳ ಬೆಳಕು ಸರಿಯಾಗಿ ಬೀಳುತ್ತಿರುವುದಿಲ್ಲ ಮತ್ತು ಸಿಸಿ ಕ್ಯಾಮೆರಾಗಳಲ್ಲಿ ರಸ್ತೆಯಲ್ಲಿ ಘಟನಾವಳಿಗಳ ದೃಶ್ಯಗಳು ಸಿಸಿ ಕ್ಯಾಮೆರಾಗಳಲ್ಲಿ ಸೆರೆಯಾಗುತ್ತಿರುವುದಿಲ್ಲ. ಆದ್ದರಿಂದ ಮರಗಳನ್ನು ಟ್ರಿಮ್ ಮಾಡುವ ಅವಶ್ಯಕತೆ ಇರುತ್ತದೆ ಎಂದು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮುಂದಿನ ಸಭೆಗೆ ಬಿಬಿಎಂಪಿ ಅರಣ್ಯ ವಿಭಾಗದವರನ್ನು ಕರೆಸಿ, ಸೂಚಿಸಿ ಕ್ರಮ ಕೈಗೊಳ್ಳಲು ಆದೇಶಿಸಿದರು.

4) **ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಒಟ್ಟು 13 ಕೋವಿಡ್ ಸೋಂಕಿತ ಪ್ರಕರಣಗಳಿದ್ದು, ಈ ಪೈಕಿ 01 ಪ್ರಕರಣಗಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ 12 ಪ್ರಕರಣಗಳು ಹೋಮ್ ಐಸೋಲೇಷನ್ ನಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ. ಆರ್.ಟಿ.ಪಿ.ಸಿ.ಆರ್ ಹಾಗೂ ರ್ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಒಟ್ಟು 59760 ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 58507 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

(signature) (signature) Prasanna Kumar A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.